# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2020-21 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:17.10.2020 ರಂದು ವಾರ್ಡ್ ನಂ.196-ಅಂಜನಾಪುರ ಕೋವಿಡ್ ವಾರ್ ರೂಂ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಪ್ರಮೋದ್ ಕುಮಾರ್.ಎನ್.ಜಿ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ವಿ.ತಿಮ್ಮಯ್ಯ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀಮತಿ ಡಾ॥ಕೀರ್ತಿ ಪ್ರಸಾದ್ | ವಾರ್ಡ್‌ನ ವೈದ್ಯಾಧಿಕಾರಿಗಳು | ಹಾಜರಿರುತ್ತಾರೆ. |
| 4 | ಶ್ರೀ ನರೇಶ್.ಬಿ.ಎಸ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 6 | ಶ್ರೀ ನವೀನ್ ಬಿ.ಸಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) | ಹಾಜರಿರುತ್ತಾರೆ. |
| 7 | ಶ್ರೀ ಜಿ.ಕೃಷ್ಣ ನಾಯಕ್ | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಹಾಜರಿರುತ್ತಾರೆ. |
| 8 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 9 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 10 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ |
| 11 | ಶ್ರೀ ಅಂತೋಣಿ | ಕೋವಿಡ್-19 ನೋಡಲ್ ಅಧಿಕಾರಿಗಳು | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಪ್ರಮೋದ್ ಕುಮಾರ್.ಎನ್.ಜಿ ರವರು ದಿ:07.11.2020 ರಂದು ಶನಿವಾರ ಮಧ್ಯಹ್ನ 3.00ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ತಿಮ್ಮಯ್ಯ.ವಿ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಬೀದಿ ದೀಪಗಳ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ನಿರ್ವಹಣೆ, ಸರಿಯಾಗಿ ನಿರ್ವಹಿಸದೇ ಇರುವುದಾಗಿ ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ ಸಭೆಗೆ ಆಗಮಿಸಿದ ಅಧಿಕಾರಿಗಳ ಪ್ರತಿನಿಧಿಗೆ ಸದರಿ ದೂರಿನ ವಿಷಯವಾಗಿ ತಿಳಿಸಿ ಮುಂದಿನ ಸಭೆಯ ದಿನಗಳೊಳಗಾಗಿ ಪರಿಹರಿಸಲು ತಿಳಿಸಿಲಾಯಿತು.



Scanned with CamScanner

2. ಬೆಸ್ಕಾಂ:-

ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಯಲ್ಲಿ ತೊಂದರೆಯಾಗುತ್ತಿದ್ದು, ಲಾಕ್ ಡೌನ್ ಸಮಯದಲ್ಲಿ ಮನೆಯಲ್ಲೆ ಕೆಲಸವನ್ನು ನಿರ್ವಹಿಸುತ್ತಿರುವುದರಿಂದ ಸದರಿ ಕೆಲಸಕ್ಕೆ ಬಹಳ ತೊಂದರೆಯುಂಟಾಗುತ್ತಿದ್ದು, ಇದನ್ನು ಸರಿ ಪಡಿಸಲು ಸಭೆಯಲ್ಲಿ ಕೋರಲಾಯಿತು.

ಈ ವಿಷಯಕ್ಕೆ ಸಂಬಂಧಿಸಿದಂತೆ, ಸಭೆಗೆ ಆಗಮಿಸಿದ ಶ್ರೀ ನವೀನ್ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಭೆಯಲ್ಲಿ ಇನ್ನು ಮುಂದೆ ಈ ರೀತಿ ಸಮಸ್ಯೆ ಪುನಾರವರ್ತನೆಯಾಗದಂತೆ ಹೆಚ್ಚುವರಿಯಾಗಿ ಟ್ರಾನ್ಸ್‌ಫಾಂ ಗಳನ್ನು ನಿಯೋಜನೆ ಮಾಡಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

3.ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ:-

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿರುವ ಬಡಾವಣೆಗಳಲ್ಲಿ ರಸ್ತೆ, ಒಳಚರಂಡಿ ಹಾಗೂ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ನಿರ್ವಹಿಸದೇ ಇರುವುದಾಗಿ ಮತ್ತು ಬೀದಿ ದೀಪಗಳ Fittings ಗಳು ಹಾಳಾಗಿದ್ದು, ಸದರಿ ಸ್ಥಳಗಳಲ್ಲಿ ಬೆಳಕಿನ ವ್ಯವಸ್ಥೆ ಇಲ್ಲದೆ ಸಾರ್ವಜನಿಕರು ಓಡಾಡಲು ಬಹಳ ಕಷ್ಟಕರವಾಗಿರುತ್ತದೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಇದಕ್ಕೆ ಸಂಬಂಧಪಟ್ಟಂತೆ ಶ್ರೀ ಕೃಷ್ಣ ನಾಯಕ್ ಸಹಾಯಕ ಇಂಜಿನಿಯರ್ ಬೆಂಗಳೂರು ರವರು ಸದರಿ ಸಮಸ್ಯೆಯ ಬಗ್ಗೆ ಮೇಲಾಧಿಕಾರಿಗಳಲ್ಲಿ ಚರ್ಚಿಸಿ ಕ್ರಮಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

4. ಘನತ್ಯಾಜ್ಯ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯ ರಾಯಲ್ ಪಾರ್ಕ್ ಹಾಗೂ ಸಾರಾ ಬೇಕರಿ ರಸ್ತೆಯ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆಯನ್ನು ಸರಿಯಾಗಿ ನಿರ್ವಹಿಸದೇ ಇರುವುದು ಕಂಡು ಬಂದಿರುತ್ತದೆ.

ಸಾರಾ ಬೇಕರಿ ರಸ್ತೆ ವ್ಯಾಪ್ತಿಯಲ್ಲಿ ಮನೆಯ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಬೇರ್ಪಡಿಸದೇ ನೀಡುತ್ತಿರುವುದರಿಂದ ಸದರಿ ರಸ್ತೆಗೆ ಕಸವನ್ನು ಸಂಗ್ರಹಿಸುವ ಆಟೋ ಹೋಗಲು ಸಾಧ್ಯವಿಲ್ಲವೆಂದು ಕಿರಿಯ ಹಾಗು ಹಿರಿಯ ಆರೋಗ್ಯ ಪರಿವೀಕ್ಷಕರು ಈ ಸಭೆಯಲ್ಲಿ ತಿಳಿಸಿರುತ್ತಾರೆ.

5.ಇಂಜಿನಿಯರಿಂಗ್:-

ವಾರ್ಡ್ ವ್ಯಾಪ್ತಿಯಲ್ಲಿ ಹಲವು ಬಡಾವಣೆಯಲ್ಲಿ ನಾಮಫಲಕ ಇಲ್ಲದೆ ಇರುವುದರ ಬಗ್ಗೆ ಚರ್ಚಿಸಲಾಗಿ

ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ನಾಮಫಲಕವನ್ನು ಶೀಘ್ರದಲ್ಲೇ ಅಳವಡಿಸುವುದಾಗಿ ಸಭೆಯಲ್ಲಿ ತಿಳಿಸಲಾಯಿತು.

6.ಒಳಚರಂಡಿ ವ್ಯವಸ್ಥೆ:-

ವಾರ್ಡ್ ವ್ಯಾಪ್ತಿಯಲ್ಲಿನ ಹಲವು ಬಡಾವಣೆಗಳಲ್ಲಿ ಎಲ್.ಎನ್.ಟಿ ರವರ ವತಿಯಿಂದ ನಿರ್ವಹಿಸಿರುವ ಕಾಮಗಾರಿಯು ತೃಪ್ತಿಕರವಾಗಿರುವುದಿಲ್ಲ ಹಾಗೂ ಈ ಒಳಚರಂಡಿ ವ್ಯವಸ್ಥೆಯಲ್ಲಿ ಸಾರ್ವಜನಿಕರಿಗೆ ತೊಂದರೆಗಳಾಗುತ್ತಿದ್ದು ಸರಿ ಪಡಿಸುವಂತೆ, ಕೋರಿರುತ್ತಾರೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ರಂಗಪ್ಪ ಸಹಾಯಕ ಕಾರ್ಯಪಾಲಕ ಅಭಿಯಂತರರು ಇವರು ಗೊಲ್ಲಹಳ್ಳಿ ಹಾಗೂ ಎಸ್.ಸಿ.ಆರ್ ಬಡಾವಣೆಯಲ್ಲಿ ಸಣ್ಣ ಪುಟ್ಟ ಲೋಪದೋಷಗಳು ಕಂಡು ಬಂದಿದ್ದು ಇವುಗಳನ್ನು ಶೀಘ್ರವಾಗಿ ಸರಿಪಡಿಸಲಾಗುವುದೆಂದು ತಿಳಿಸಿರುತ್ತಾರೆ ಹಾಗೂ ಈ ವಾರ್ಡ್ ವ್ಯಾಪ್ತಿಯಲ್ಲಿ ಇನ್ನು ದೊಡ್ಡಮಟ್ಟದ ಒಳಚರಂಡಿ ಕಾಮಗಾರಿ ಬಾಕಿ ಇದ್ದು, ಇದನ್ನು ಪೂರ್ಣಗೊಳಿಸಿದ ನಂತರ ಸಾರ್ವಜನಿಕರಿಗೆ ಅನುಕೂಲವಾಗುವುದು ಎಂದು ತಿಳಿಸಿರುತ್ತಾರೆ.

--3--

Scanned with CamScanner

7.ನೋಡಲ್ ಅಧಿಕಾರಿ:-

ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ

Scanned with CamScanner